## ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಚೇರಿ, ಧಾರವಾಡ

### ಅಧಿಸೂಚನೆ ಸಂಖ್ಯೆ : 04/2019 ದಿನಾಂಕ 18-09-2019

*ಧಾರವಾಡ ಜಿಲ್ಲಾ ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಹಿಂಬಾಕಿ (ಬ್ಯಾಕಲಾಗ್) ಒಟ್ಟು 09 (ಒಂಭತ್ತು) ಶೀಘ್ರಲಿಪಿಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.*

*ಆನ್ ಲೈನ್ ಮೂಲಕ ಅರ್ಜಿಗಳನ್ನು ದಿನಾಂಕ **01.10.2019** ರಿಂದ ದಿನಾಂಕ **30.10.2019 ರ ರಾತ್ರಿ 11.59** ರವರೆಗೆ ಧಾರವಾಡ ಜಿಲ್ಲಾ ವೆಬ್‌ಸೈಟ್* **https://districts.ecourts.gov.in/dharwad-onlinerecruitment** *ನಲ್ಲಿ ನೀಡಲಾದ ಲಿಂಕನಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುತ್ತದೆ.*

1) ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಒಟ್ಟು |
|---|---|---|---|---|---|
| ಪ.ಪಂ | - | - | 1 | - | 1 |
| ಪ. ಜಾ. | 1 | 1 | - | 1 | 3 |
| 2-ಎ | 1 | 1 | - | 1 | 3 |
| 2-ಬಿ | - | - | 1 | - | 1 |
| 3-ಎ | - | - | 1 | - | 1 |
| ಒಟ್ಟು | 2 | 2 | 3 | 2 | 9 |

### 2) ಆಯ್ಕೆ ವಿಧಾನ:

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982 ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳ

18/9

(ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮ, 2007 ರನ್ವಯ ಈ ಕೆಳಕಂಡಂತೆ ಅರ್ಹತಾ ಪರೀಕ್ಷೆಯನ್ನು ಏರ್ಪಡಿಸಲಾಗುವುದು.

3) <u>ಅರ್ಹತಾ ಪರೀಕ್ಷೆ:</u>

ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಟ 100 ಅಂಕಗಳಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು. ಮತ್ತು ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನ [viva] ವು 10 ಅಂಕಗಳನ್ನೊಳಗೊಂಡಿರುತ್ತದೆ.

ಅಭ್ಯರ್ಥಿಗಳಿಗೆ ಕನ್ನಡ ಭಾಷೆಯಲ್ಲಿ ಒಂದು ನಿಮಿಷಕ್ಕೆ 260 ಅಕ್ಷರಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಂಪ್ಯೂಟರ್ ಮೂಲಕ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

ಅಭ್ಯರ್ಥಿಗಳಿಗೆ ಆಂಗ್ಲ ಭಾಷೆಯಲ್ಲಿ ಒಂದು ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಪ್ಯೂಟರ್ ಮೂಲಕ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

<u>4) ಪರಿವೀಕ್ಷಣಾ ಅವಧಿ:</u>

ನೇಮಕ ಹೊಂದಿದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ, ಪರಿವೀಕ್ಷಣಾ ನಿಯಮ 1977ರ ಪ್ರಕಾರ 02 ವರ್ಷಗಳ ಪರಿವೀಕ್ಷಣಾ ಅವಧಿಯಲ್ಲಿರತಕ್ಕದ್ದು ಹಾಗೂ ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ನಿಯಮದಡಿ ಗೊತ್ತುಪಡಿಸಿದ್ದರೆ ಅವುಗಳಲ್ಲಿ ಉತ್ತೀರ್ಣರಾಗತಕ್ಕದ್ದು.

5) ಪಿಂಚಣಿ ಸೌಲಭ್ಯ:

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್)04/ಪಿ.ಇ.ಟಿ/2005, ದಿನಾಂಕ 31.03.2006 ರಂತೆ ಅನ್ವಯಿಸುವುದು

6) ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ43, ಸೇವನೆ 2008, ದಿ. 07/03/2012 ಮತ್ತು ಸಿಆಸುಡಿ 15, ಸೇವನೆ. 17 ದಿ. 05/0/2017 ರನ್ವಯ ಆಯ್ಕೆಯಾದ ಶೀಘ್ರಲಿಪಿಗಾರರರು ಕರ್ನಾಟಕ ಸರ್ಕಾರ ನಿಗದಿಪಡಿಸುವ ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ನಿಗದಿತ ಅವಧಿಯಲ್ಲಿ ಉತ್ತೀರ್ಣರಾಗತಕ್ಕದ್ದು.

7) ಶೈಕ್ಷಣಿಕ ವಿದ್ಯಾರ್ಹತೆ:

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್. ಎಸ್. ಎಲ್. ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ದರ್ಜೆ [Senior Grade] ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರ್ಯಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿರಬೇಕು.

ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

8) <u>ವೇತನ ಶ್ರೇಣಿ:</u>

ರೂ.27650-650-29600-750-32600-850-36000-950-39800-1100-46400-1250-52650 ಹಾಗೂ ಇತರ ಭತ್ಯೆಗಳು.

9) <u>ವಯೋಮಿತಿ:</u>

<u>ಕನಿಷ್ಠ 18 ವರ್ಷಗಳು</u>

<u>ಗರಿಷ್ಠ ವಯೋಮಿತಿ ಈ ಕೆಳಗಿನಂತಿದೆ :</u>

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, : 40 ವರ್ಷ
ಪ್ರವರ್ಗ-1

ಪ್ರವರ್ಗ 2ಎ, 2ಬಿ, 3ಎ, 3ಬಿ : 38 ವರ್ಷ

ಕನಿಷ್ಠ ಹಾಗೂ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಸ್ವೀಕರಿಸಲು ಕೊನೆಗೊಳ್ಳುವ ದಿನಾಂಕ [Last date for submission of application]ಕ್ಕೆ ನಿಗದಿ ಪಡಿಸಲಾಗಿದೆ.

ಸರ್ಕಾರಿ ಸೇವೆಯಲ್ಲಿರುವವರಿಗೆ/ವಿಧವೆಯರಿಗೆ/ ಅಂಗವಿಕಲರಿಗೆ, ಮಾಜಿ ಸೈನಿಕರಿಗೆ ವಯೋಮಿತಿಯಲ್ಲಿ ನಿಯಮಾನುಸಾರ ಸಡಿಲಿಕೆ ಇರುತ್ತದೆ. (ಈ ಬಗ್ಗೆ ಪ್ರಮಾಣಪತ್ರ ಸಲ್ಲಿಸುವುದು).

10) <u>ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವವರಿಗೆ ಸೂಚನೆಗಳು:-</u>

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಯು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ [Last date for submission of application] ಕರ್ನಾಟಕ ಸರ್ಕಾರವು ನಿಗದಿ ಪಡಿಸಿ ಪೂರೈಸಿದ ನಿಗದಿತ ನಮೂನೆ ಹಾಗೂ ಸಕ್ಷಮ ಪ್ರಾಧಿಕಾರ ನೀಡಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು ಮತ್ತು ಚಾಲ್ತಿಯಲ್ಲಿರತಕ್ಕದ್ದು.

ಗ್ರಾಮೀಣ ಕೃಪಾಂಕ (ಸಾಮಾನ್ಯ ಅಭ್ಯರ್ಥಿಯು ನಮೂನೆ 1 ಮತ್ತು 2 ರಲ್ಲಿ ಹಾಗೂ ಇತರೆ ಅಭ್ಯರ್ಥಿಯು ನಮೂನೆ 2ರಲ್ಲಿ) ಹಾಗೂ ಅಂಗವಿಕಲ/ಮಾಜಿಸೈನಿಕ/ವಿಧವೆ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವವರು ಸಕ್ಷಮ ಪ್ರಾಧಿಕಾರ ನೀಡಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಪೇಕ್ಷಣಾ ಪತ್ರ [NOC] ವನ್ನು ಪಡೆದು ಅರ್ಜಿ ಸಲ್ಲಿಸುವುದು ಹಾಗೂ ಆ ಬಗ್ಗೆ ಪಡೆದ ಪತ್ರವನ್ನು ದಾಖಲಾತಿ ಪರಿಶೀಲನೆ ವೇಳೆಗೆ ಹಾಜರಪಡಿಸತಕ್ಕದ್ದು.

ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಅಂದರೆ ವಿದ್ಯಾರ್ಹತೆಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಹುಟ್ಟಿದ ದಿನಾಂಕದ ಪ್ರಮಾಣಪತ್ರ, ಮೀಸಲಾತಿ ಪ್ರಮಾಣ ಪತ್ರ ಇತ್ಯಾದಿಗಳನ್ನು ಪರಿಶೀಲನೆಗಾಗಿ ಆಯ್ಕೆ ಪರೀಕ್ಷೆ/ಸಂದರ್ಶನ ಸಮಯದಲ್ಲಿ ಹಾಜರಪಡಿಸತಕ್ಕದ್ದು. ಒಂದು ವೇಳೆ ಯಾವುದೇ ಮೂಲ ಪ್ರಮಾಣ ಪತ್ರಗಳು ಸುಳ್ಳು ಎಂದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸುವುದರೊಂದಿಗೆ ಸುಳ್ಳು ಮಾಹಿತಿ ನೀಡಿದ ಹಿನ್ನಲೆಯಲ್ಲಿ ಕ್ರಿಮಿನಲ್ ಪ್ರಕರಣಕ್ಕೆ ಗುರಿಪಡಿಸಲಾಗುವುದು.

## 11. ಅರ್ಜಿ ಸಲ್ಲಿಸುವ ವಿಧಾನಃ

ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸಬೇಕು. **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

ಅಭ್ಯರ್ಥಿಯು ಭಾವಚಿತ್ರ ಹಾಗೂ ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

A). **5 cm** ಉದ್ದ **x 3.6 cm** ಅಗಲವುಳ್ಳ ಇತ್ತೀಚಿನ ಬಣ್ಣದ ಭಾವಚಿತ್ರ ಮತ್ತು **50 kb** ಅಳತೆಯದ್ದಾಗಿರಬೇಕು ಹಾಗೂ ಅದು **jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

B). ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

C). ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5 cm** ಉದ್ದ **x 7.5 cm** ಅಗಲವುಳ್ಳದ್ದಾಗಿರಬೇಕು ಮತ್ತು **26 kb** ಅಳತೆಯದ್ದಾಗಿರಬೇಕು ಹಾಗೂ **jpg** ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

ತದನಂತರ ಅಭ್ಯರ್ಥಿಯು ಆನ್ ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಂತರ ತುಂಬಿದ ಅರ್ಜಿಯ ಪ್ರತಿಯನ್ನು **down load** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿಯೇ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಿ ಸಲ್ಲಿಸಲು *ದಿನಾಂಕ 30.10.2019 ರ ರಾತ್ರಿ 11.59* ರವರೆಗೆ ಅವಕಾಶವಿರುತ್ತದೆ.

ಅರ್ಹ ಅಭ್ಯರ್ಥಿಗಳಿಗೆ **SMS & E-mail** ಮುಖಾಂತರ ಮಾಹಿತಿ ನೀಡಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆ/ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟನಲ್ಲಿ ಪ್ರಕಟಿಸಲಾಗುವುದು.

ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿಯನ್ನು ಸಲ್ಲಿಸಲು ಯಾವುದೇ ರೀತಿಯ ಶುಲ್ಕವನ್ನು ನಿಗದಿಪಡಿಸಿರುವುದಿಲ್ಲ.

**12. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣೆ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

**ಪ್ರಮುಖವಾದ ಸೂಚನೆಗಳು:**

1. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ ಹೊಂದಿರುವವರಿಗೆ ಜನನ ದಿನಾಂಕವನ್ನು ನಮೂದಿಸಿರುವ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ ಹೊಂದಿರತಕ್ಕದ್ದು.
2. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ-1ರ ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.
3. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನನಿ/2005, ದಿನಾಂಕ: 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ್ದಿರಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
4. ಗ್ರಾಮೀಣ ಮಿಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.
5. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ: 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಹೊಂದಿರಬೇಕು.

6. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆ-ಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರವನ್ನು ಹೊಂದಿರಬೇಕು.
7. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರರಿಂದ ಪಡೆದ ಪ್ರಮಾಣಪತ್ರವನ್ನು ಹೊಂದಿರಬೇಕು.
8. ಒಂದು ವೇಳೆ, ಅರ್ಹ ಮಹಿಳಾ/ಮಾಜಿ ಸೈನಿಕ/ಯೋಜನಾ ನಿರಾಶ್ರಿತ/ ಗ್ರಾಮೀಣ ಕೃಪಾಂಕ/ಕನ್ನಡ ಮಾಧ್ಯಮದಡಿಗಳಲ್ಲಿ ಮೀಸಲಾತಿ ಸೌಲಭ್ಯ ಪಡೆಯುವ ಅಭ್ಯರ್ಥಿಗಳು ಶೇಕಡಾವಾರು ಪ್ರಮಾಣದಲ್ಲಿ ಲಭ್ಯವಿರದ ಪಕ್ಷದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಪುರುಷ ಅಥವಾ ಅದೇ ಮೀಸಲಾತಿಗೆ ಸಂಬಂಧಿಸಿದ ಇತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
9. ಅಭ್ಯರ್ಥಿಯು ಕೊನೆಯಲ್ಲಿ ವಿದ್ಯಾಭ್ಯಾಸ ಮಾಡಿದ ಶಾಲಾ/ಕಾಲೇಜಿನ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹೊಂದಿರಬೇಕು.
10. ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳ ಇತ್ತೀಚಿನ ಎರಡು ನಡತೆ ಪ್ರಮಾಣ ಪತ್ರಗಳನ್ನು ಹೊಂದಿರಬೇಕು.
11. ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರಮಾಣಪತ್ರಗಳನ್ನು ಹೊಂದಿರಬೇಕು.

## <u>ಇತರೆ ಸೂಚನೆಗಳು:</u>

1. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ-ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.

2. ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗಬೇಕು.

3. ಅರ್ಹತಾ ಪರೀಕ್ಷೆಯ ವೇಳಾಪಟ್ಟಿ, ಸಂದರ್ಶನದ ವೇಳಾಪಟ್ಟಿ ಹಾಗೂ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಈ ಕಚೇರಿಯ ವೆಬ್‌ಸೈಟ್ **<u>https://districts.ecourts.gov.in/dharwad-onlinerecruitment</u>** ರಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಸಂದರ್ಶನಕ್ಕೆ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಪ್ರತಿಯೊಂದಿಗೆ ಬೇಕಾಗುವ ಇತರೇ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸುವುದು.

4. ಸಂದರ್ಶನದ SMS ಅಥವಾ ಇ-ಮೇಲ್ ಬಾರದೇ ಇರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

5. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಅಸ್ಪದವಿರುವುದಿಲ್ಲ.

(ಈಶಪ್ಪಾ ಕೆ ಭೂತೆ),
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಧಾರವಾಡ.

**ಪ್ರತಿಯನ್ನು** ಮಾನ್ಯ ಮಹಾವಿಲೇಖನಾಧಿಕಾರಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರಿಗೆ ಮುಖ್ಯ ಪತ್ರದೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

**ಪ್ರತಿಯನ್ನು:**

1. ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ದ.ಕನ್ನಡ, ಗದಗ, ಗುಲ್ಬರ್ಗಾ, ಹಾಸನ, ಹಾವೇರಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಯಾದಗಿರಿ, ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
2. ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು, ಧಾರವಾಡ.
3. ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು, ಹುಬ್ಬಳ್ಳಿ.
4. ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ಕಲಘಟಗಿ.
5. ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ಕುಂದಗೋಳ.
6. ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ನವಲಗುಂದ.
7. ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ಕಲಘಟಗಿ.
8. ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ಕುಂದಗೋಳ.
9. ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಪ್‌ಸಿ, ನವಲಗುಂದ.
10. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
11. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ.
12. ಜಿಲ್ಲಾ ವಾರ್ತಾಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ, ಧಾರವಾಡ ಇವರಿಗೆ ಸ್ಥಳಿಯ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ.
13. ಈ ನ್ಯಾಯಾಲಯದ ಸೂಚನಾಫಲಕ್ಕಾಗಿ.